ಆ) ಜಮೀನು ಲೀಸಿಗೆ ಕೊಡುವಾಗ ವಿಧಿಸಿದ ಷರತ್ತುಗಳೇನು;

ಇ) ಕೊಡಲಾದ ಲೀಸ್‌ಗಳಲ್ಲಿ, ಲೀಸ್ ಅವಧಿ ಮುಗಿದ ಪ್ರಕರಣಗಳೆಷ್ಟು;

ಈ) ಲೀಸ್ ಮುಗಿದ ಪ್ರಕರಣಗಳಲ್ಲಿ ಲೀಸಿನಲ್ಲಿ ವಿಧಿಸಲಾದ ಷರತ್ತುಗಳನ್ನು ಪೂರೈಸಿದ್ದು ಎಷ್ಟು ರೈತರಿದ್ದಾರೆ; ಲೀಸ್ ಪೂರೈಸಿದ ಸದರಿ ರೈತರಿಗೆ ಜಮೀನು ಮಂಜೂರು ಮಾಡಲಾಗಿದೆಯೇ;

ಉ) ಮಾಡದೇ ಇದ್ದಲ್ಲಿ ಕಾರಣವೇನು; ಷರತ್ತು ಪೂರೈಸಿದವರಿಗೆ ಜಮೀನು ಮಂಜೂರು ಮಾಡಲು ಆದೇಶ ಹೊರಡಿಸಲಾಗುವುದೇ;

ಶ್ರೀಕೆ. ಹೆಚ್. ರಂಗನಾಥ (ಅರಣ್ಯ ಸಚಿವರು)

ಅ) ಉಡುಪಿ ಜಿಲ್ಲೆಯಲ್ಲಿ ಅರಣ್ಯ ಇಲಖೆಯ ಗೇರುತೋಟಗಳನ್ನು ಯಾವುದೆ ರೈತರಿಗೆ ಲೀಸ್ ಆಧಾರದಲ್ಲಿ ನೀಡಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಆನಂದ ಸಾರ್ವಜನಿಕ ಹಾಗೂ ಶೈಕ್ಷಣಿಕ ಸೊಸೈಟಿ

3257 (3821) : ಶ್ರೀ ಅಂಗಾರ ಎಸ್. (ಸುಳ್ಯ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಆನಂದ ಸಾಮಾಜಿಕ ಹಾಗೂ ಶೈಕ್ಷಣಿಕ ಸೊಸೈಟಿಯನ್ನು ಯಾವಾಗ ನೋಂದಾವಣೆ ಮಾಡಲಾಯಿತು. ಯಾವ ನಿಯಮದಡಿಯಲ್ಲಿ ನೋಂದಾಯಿಸಲಾಗಿದೆ;

ಆ) ಸದರಿ ಸೊಸೈಟಿಯನ್ನು ಟ್ರಸ್ಟ್ ಆಗಿ ಪರಿವರ್ತಿಸಲಾಗಿದೆಯೇ;

ಇ) ಪರಿವರ್ತಿಸಿದ್ದರೆ ಯಾವ ನಿಯಮದಡಿಯಲ್ಲಿ ಮತ್ತು ಯಾವಾಗ ಪರಿವರ್ತಿಸಲಾಗಿದೆ; ಪೂರ್ತಿ ವಿವರ ನೀಡುವುದು?

ಶ್ರೀ ಹೆಚ್. ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು)

ಅ) ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಪ್ರಕಾರ ದಿನಾಂಕ: –03.12.1973 ರಂದು ನೋಂದಾಯಿಸಲಾಗಿದೆ.

ಆ) ಇಲ್ಲ.

ನೋಂದಾಯಿಸಲಾದ ಸಂಘವನ್ನು ಟ್ರಸ್ಟ್ ಆಗಿ ಪರಿವರ್ತಿಸಲು ಕಾನೂನಿನಲ್ಲಿ ಅವಕಾಶವಿಲ್ಲ ಸಂಘವು ಸಂಘದ ಉದ್ದೇಶಗಳ ಅನುಷ್ಠಾನಕ್ಕಾಗಿ ಟ್ರಸ್ಟ್ ನೋಂದಾಯಿಸಿರುತ್ತಾರೆ, ಸೊಸೈಟಿ ಅಡಿಯಲ್ಲಿ ಟ್ರಸ್ಟ್ ಕಾರ್ಯನಿರ್ವಹಿಸಬೇಕಾಗಿರುತ್ತದೆ ಟ್ರಸ್ಟ್‌ಗೆ ಪ್ರತ್ಯೇಕ ಅಸ್ತಿತ್ವ ಇರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ದಕ್ಷಿಣ ಕನ್ನಡ ಜಿಲ್ಲೆಗೆ ಬರ ಪರಿಹಾರಕ್ಕೆ ಬಿಡುಗಡೆ ಮಾಡಿರುವ ಹಣ

3258 (3822) : ಶ್ರೀ ಅಂಗಾರ ಎಸ್. (ಸೂಳ್ಯ) ಮಾನ್ಯ ಕಂದಾಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಿಂದ ಬರಪರಿಹಾರ ಕಾರ್ಯಕ್ರಮಕ್ಕಾಗಿ ದಕ್ಷಿಣ ಕನ್ನಡ ಜಿಲ್ಲೆಗೆ ಕಳೆದ ನಾಲ್ಕು ವರ್ಷಗಳಲ್ಲಿ ಒದಗಿಸಲಾದ ಅನುದಾನ, ಆಹಾರಧಾನ್ಯ ಎಷ್ಟು (ವರ್ಷವಾರು ವಿವರ ನೀಡುವುದು) :

ಆ) ಸದರಿ ಅನುದಾನ ಆಹಾರಧಾನ್ಯದಲ್ಲಿ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಿಗೆ ಎಷ್ಟೆಷ್ಟು ಒದಗಿಸಲಾಗಿದೆ (ವರ್ಷವಾರು ವಿವರ ನೀಡುವುದು)?

ಶ್ರೀ ಎಂ. ಮಲ್ಲಿಕಾರ್ಜುನ ನಾಗಪ್ಪ (ಕಂದಾಯ ರಾಜ್ಯ ಸಚಿವರು)

ಅ) ಕಳೆದ 4 ವರ್ಷಗಳಿಂದ ದಕ್ಷಿಣ ಕನ್ನಡ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲಾಗಿರುವುದಿಲ್ಲ. ಆದ್ದರಿಂದ ಜಿಲ್ಲೆಗೆ ಬರಪರಿಹಾರ ಕಾರ್ಯಕಾಮಗಾರಿಗಾಗಿ ಅನುದಾನ ಮತ್ತು ಆಹಾರಧಾನ್ಯಗಳನ್ನು ಒದಗಿಸಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಸುಳ್ಯ ತಾಲ್ಲೂಕಿನಲ್ಲಿ ಮುಳುಗು ಸೇತುವೆಗಳು ಮುಳುಗಡೆಯಾಗುತ್ತಿರುವ ಬಗ್ಗೆ

3259 (3823) : ಶ್ರೀ ಅಂಗಾರ ಎಸ್. (ಸೂಳ್ಯ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸುಳ್ಯ ತಾಲ್ಲೂಕಿನ ಜಾಲ್ಸೂರು–ಸುಬ್ರಹ್ಮಣ್ಯ ರಸ್ತೆ ಸೋಣಂಗೇರಿ ಮತ್ತು ಕ್ಯೂಕುಳಿ ಎಂಬಲ್ಲಿ ಮುಳುಗು ಸೇತುವೆಗಳಿದ್ದು, ಮಳೆಗಾಲದಲ್ಲಿ ವಿಪರೀತ ಮಳೆ ಬಂದು ನೆರೆ ನೀರಿನಿಂದ ಮುಳುಗು ಸೇತುವೆಗಳು ಮುಳುಗಡೆಯಾಗಿ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದರೆ, ಸದರಿ ಸ್ಥಳಗಳಲ್ಲಿ ಸರ್ವಋತು ಸೇತುವೆಯನ್ನು ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದರೆ, ಎಷ್ಟು ಸಮಯದಲ್ಲಿ ಮಾಡಲಾಗುವುದು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು)

ಅ) ಬಂದಿದೆ.

ಆ) ಜಾಲ್ಸೂರು–ಸುಬ್ರಹ್ಮಣ್ಯ ರಸ್ತೆಯ ಜಿಲ್ಲಾ ಮುಖ್ಯ ರಸ್ತೆಯಾಗಿದ್ದು, ಈ ರಸ್ತೆಯಲ್ಲಿರುವ 2 ಮೋರಿಗಳನ್ನು ಅಂದರೆ ಮುಳುಗು ಸೇತುವೆಗಳನ್ನು ಸರ್ವಋತು ಸೇತುವೆಗಳನ್ನಾಗಿ ಪರಿವರ್ತಿಸಲು ಸದ್ಯಕ್ಕೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಅನಧಿಕೃತ ಸಾಗುವಳಿಯ ಸಕ್ರಮೀಕರಣ

3260 (3825) : ಶ್ರೀ ಅಂಗಾರ ಎಸ್. (ಸೂಳ್ಯ) ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಳೆದ ಅನೇಕ ವರ್ಷಗಳಿಂದ ಅರಣ್ಯ ಇಲಾಖೆಗೆ ಸಂಬಂಧಿಸಿದ ಸ್ಥಳದಲ್ಲಿ ಅನಧಿಕೃತವಾಗಿ ಆಕ್ರಮಿಸಿ ಸ್ವಾಧೀನಪಡಿಸಿ ಕೃಷಿ ಮಾಡಿಕೊಂಡು ಬಂದಿರುವ ಕುಟುಂಬಗಳ ಸ್ಥಳವನ್ನು ಸಕ್ರಮಗೊಳಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

ಆ) ಇದ್ದರೆ ಈಗಾಗಲೇ ಯಾವ ಕ್ರಮ ಕೈಗೊಳ್ಳಲಾಗಿದೆ;

ಇ) ಹಾಗಿದ್ದಲ್ಲಿ ಎಷ್ಟು ಸಮಯದಲ್ಲಿ ಸಕ್ರಮಗೊಳಿಸಲಾಗುವುದು?

ಶ್ರೀ ಕೆ. ಹೆಚ್. ರಂಗನಾಥ್ (ಅರಣ್ಯ ಸಚಿವರು)

ಅ) ಇದೆ.